# ಜಿಲ್ಲಾ ಪಂಚಾಯತ್, ರಾಯಚೂರು

ಸಂ:ಜಿಪಂರಾ/ಗ್ರಾಮೇನೇ/E-54744/2025-26 ದಿನಾಂಕ: 13.07.2026

**"ಅಧಿಸೂಚನೆ"**

**ವಿಷಯ:** ರಾಯಚೂರು ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ 05 ಗ್ರಾಮ ಪಂಚಾಯತ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿನಾಂಕ:14-11-2022.

********

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022 ರ ನಿಯಮಗಳನ್ವಯ ರಾಯಚೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯ 07 ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ ಒಟ್ಟು 13 ಹುದ್ದೆಗಳನ್ನು ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಆದರೆ 13 ಹುದ್ದೆಗಳಲ್ಲಿ ಕೇವಲ 08 ಗ್ರಾಮ ಪಂಚಾಯತಿಯ ಹುದ್ದೆಗಳಿಗೆ ಮಾತ್ರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸಲ್ಲಿಸಿದ್ದು, ಉಳಿದ 05 ಗ್ರಾಮ ಪಂಚಾಯತಿಗಳಿಗೆ ಅರ್ಹ ಅಭ್ಯರ್ಥಿಗಳ ಮುಖಾಂತರ ಅರ್ಜಿಗಳು ಸಲ್ಲಿಕೆಯಾಗಿರುವುದಿಲ್ಲ.

ಪ್ರಯುಕ್ತ ಸದರಿ 05 ಗ್ರಾಮ ಪಂಚಾಯತಿಗಳಿಗೆ ಮರು ಅಧಿಸೂಚನೆ ಹೊರಡಿಸಬೇಕಾದ ಹಿನ್ನೆಲೆಯಲ್ಲಿ ಖಾಲಿ ಇರುವ ಈ ಕೆಳಗಿನ ಹುದ್ದೆಗಳನ್ನು ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

1. **ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರಗಳು:**

| ಕ್ರ.ಸಂ | ಹುದ್ದೆಗಳ ಹೆಸರು | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 1 | ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರು | 05 |
| | ಒಟ್ಟು | 05 |

2. **ಹುದ್ದೆಗಳ ವರ್ಗೀಕರಣ:**

**"ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ"**

| ಕ್ರ ಸಂ | ಮೀಸಲಾತಿ | ಸಾಮಾನ್ಯ ಅಭ್ಯರ್ಥಿ (ಸಾ.ಅ) | ಗ್ರಾಮೀಣ ಅಭ್ಯರ್ಥಿ (ಗ್ರಾ.ಅ) | ಮಹಿಳಾ ಅಭ್ಯರ್ಥಿ (ಮ.ಅ) | ಕನ್ನಡ ಮಾಧ್ಯಮ ಅಭ್ಯರ್ಥಿ (ಕಮಾಅ) | ಯೋಜನಾ ನಿರಾಶ್ರಿತ ಅಭ್ಯರ್ಥಿ (ಯೋ.ಅ) | ಮಾಜಿಸೈನಿಕ (ಮಾ.ಸೈ) | ಅಂಗವಿಕಲ ಅಭ್ಯರ್ಥಿ (ಅಂ.ವಿ) | ತೃತೀಯ ಲಿಂಗ | ಒಟ್ಟು ಹುದ್ದೆಗಳು |
|---|---|---|---|---|---|---|---|---|---|---|
| 1 | ಪ.ಜಾ | 02 | - | - | - | - | - | - | - | 02 |

| | | | | | | | | | | |
|---|---|---|---|---|---|---|---|---|---|---|
| 2 | ಸಾಮಾನ್ಯ | - | - | 01 | - | - | - | - | - | 01 |
| 3 | ಪ್ರವರ್ಗ-I | - | - | - | - | - | - | - | - | - |
| 4 | -IIಎ | - | - | - | - | - | - | 01 | - | 01 |
| 5 | -II ಬಿ | - | - | 01 | - | - | - | - | - | 01 |
| | ಒಟ್ಟು | 02 | - | 02 | - | - | - | 01 | - | 05 |

3. **ಗ್ರಾಮ ಪಂಚಾಯತ್ ವಾರು ಖಾಲಿ ಇರುವ ಹುದ್ದೆಗಳು ಮತ್ತು ಅವುಗಳ ಮೀಸಲಾತಿ ವಿವರ:**

**"ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಮೀಸಲಾತಿ "**

| ಕ್ರ. ಸಂ | ತಾಲೂಕು | ಗ್ರಾ.ಪಂ ಹೆಸರು | ರೋಸ್ಟರ್ ಬಿಂದು | ರೋಸ್ಟರ್ ಬಿಂದು ಹಾಗೂ ಸಮತಲ ಮೀಸಲಾತಿಯ ವಿವರ |
|---|---|---|---|---|
| 1 | ದೇವದುರ್ಗ | ಮಸರಕಲ್ | 25 | ಪ್ರ.ವರ್ಗ-2 (ಎ) (ಅಂ.ವಿ) |
| 2 | ಮಾನವಿ | ಭೋಗಾವತಿ | 27 | ಪ.ಜಾ (ಪ್ರವರ್ಗ-ಬಿ)(ಇತರೆ) |
| 3 | ರಾಯಚೂರು | ಮರ್ಚಟ್ಹಾಳ | 32 | ಸಾ.ಅ (ಮ.ಅ) |
| 4 | ಸಿರವಾರ | ಗಣದಿನ್ನಿ | 33 | ಪ.ಜಾ (ಪ್ರವರ್ಗ-ಸಿ) (ಇತರೆ) |
| 5 | ದೇವದುರ್ಗ | ಜೇರಬಂಡಿ | 35 | ಪ್ರವರ್ಗ-2 ಬಿ (ಮ.ಅ) |

4) **ವೇತನ** : **ಗ್ರಾಮ ಪಂಚಾಯತ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರು ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಗೌರವ ಸಂಭಾವನೆಗೆ ಅರ್ಹರಾಗಿರತಕ್ಕದ್ದು.**

5) **ಅರ್ಜಿ ಸಲ್ಲಿಸುವ ದಿನಾಂಕ**

ಎ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ : 15.07.2026.

ಬಿ) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 29.07.2026.

6) **ಅರ್ಜಿ ಶುಲ್ಕ:**

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ. 500 |
| ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 300 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮಾಜಿಸೈನಿಕ ಅಭ್ಯರ್ಥಿಗಳಿಗೆ | ರೂ.200 |
| ವಿಶೇಷ ಚೇತನ ಅಭ್ಯರ್ಥಿಗಳಿಗೆ | ರೂ.100 |

7) **ಶುಲ್ಕ ಪಾವತಿಸುವ ವಿಧಾನ:**

ಆನ್ ಲೈನ್ ಅರ್ಜಿ ಸಲ್ಲಿಸುವ ಪೂರ್ವದಲ್ಲಿ ನಿಮ್ಮ ಗ್ರಾಮ ಪಂಚಾಯತಿಯಲ್ಲಿನ ಯಾವುದೇ SBI ಶಾಖೆಗೆ ಭೇಟಿ ನೀಡಿ ಶುಲ್ಕ ಪಾವತಿಸಿ, ಪಾವತಿಸಿದ ರಶೀದಿಯನ್ನು ಬ್ಯಾಂಕ್ ನವರ ಹತ್ತಿರ ಪಡೆದುಕೊಂಡು ಸದರಿ ರಶೀದಿಯನ್ನು, ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಅಪ್ಲೋಡ್ ಮಾಡುವುದು.

| ಕ್ರ.ಸಂ | ಖಾತೆದಾರರ ಹೆಸರು | ಬ್ಯಾಂಕ್ ಹೆಸರು | ಬ್ಯಾಂಕ್ ಶಾಖೆಯ ಹೆಸರು | ಖಾತೆ ನಂಬರ್ | IFSC ಕೋಡ್ ನಂಬರ್ |
|---|---|---|---|---|---|

| | | | | | |
|---|---|---|---|---|---|
| | ZP GENERAL ACCOUNTS | State Bank of India | Lingasugur road, Raichur | 52075526994 | SBIN0020203 |

1. ಬ್ಯಾಂಕಿನ ಹೆಸರು/Name of the Bank
2. ರಶೀದಿ ಸಂಖ್ಯೆ/Receipt Number
3. ರಶೀದಿ ದಿನಾಂಕ/Receipt Date
4. ಪಾವತಿಸಿದ ಮೊತ್ತ (ರೂಪಾಯಿಗಳಲ್ಲಿ)/Amount Paid (in Rupees)

ಬ್ಯಾಂಕ್ ಶುಲ್ಕವನ್ನು ಪಾವತಿಸದೇ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8)

| | |
|---|---|
| Online ಮೂಲಕ ಅರ್ಜಿ ಸಲ್ಲಿಸಲುವೆಬ್ ಸೈಟ್ | https://zpraichur.karnataka.gov.in/kn |

**8 A) Online ಮೂಲಕ ಅರ್ಜಿ ಸಲ್ಲಿಸಲು ಅರ್ಹತೆ ಇರುವ ಅಭ್ಯರ್ಥಿಗಳು.**

(ಸದರಿ ಅಧಿಸೂಚನೆ ಕ್ರ.ಸಂ 03 ರಲ್ಲಿರುವ ಗ್ರಾಮ ಪಂಚಾಯತಿಗಳ ರೋಸ್ಟರ್ ಬಿಂದು ಮತ್ತು ಸಮತಲ ಮೀಸಲಾತಿಯಂತೆ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಹೊಂದಿದ)

1)ಆಯಾ ಗ್ರಾಮ ಪಂಚಾಯತಿಯ ಸ್ಥಳೀಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ.

2)ಅದೇ ತಾಲೂಕಿನ ಇತರೆ ಗ್ರಾಮ ಪಂಚಾಯತಿ ಅಭ್ಯರ್ಥಿಗಳಿಗೆ ಎರಡನೇ ಆದ್ಯತೆ.

3)ಒಂದು ವೇಳೆ ಸದರಿ ಹುದ್ದೆಗೆ ನಿಗದಿಪಡಿಸಿದ ಸಂಪೂರ್ಣ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಪಿ.ಯು.ಸಿ ವಿದ್ಯಾರ್ಹತೆ ಹೊಂದಿದ ಸ್ಥಳೀಯ ಅಭ್ಯರ್ಥಿಗಳಿಗ ಮೂರನೇ ಆದ್ಯತೆ.

9) <u>ವಿವರವಾದ ಹಂತಗಳು:</u>

ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತು ಸೂಚನೆಗಳು, ಅರ್ಹತಾ ಷರತ್ತುಗಳನ್ನುಓದಿಕೊಳ್ಳತಕ್ಕದ್ದು. ಈ ಕೆಳಗಿನ ಕೋಷ್ಟಕದಲ್ಲಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿಉಪಯೋಗಿಸಿದ ಪದಗಳ ಅರ್ಥವನ್ನು ಈ ಮುಂದಿನಂತೆ ಅರ್ಥೈಸಿಕೊಳ್ಳಬೇಕು.

| | | | |
|---|---|---|---|
| ಸಾ.ಅ | ಸಾಮಾನ್ಯ ಅಭ್ಯರ್ಥಿ | GM | General Merit |
| ಪ.ಜಾ | ಪರಿಶಿಷ್ಟ ಜಾತಿ (ಪ್ರವರ್ಗ-ಎ,ಬಿ ಮತ್ತು ಸಿ) | SC | Sheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Sheduled Tribe |
| ಪ್ರ-1 | ಪ್ರವರ್ಗ-1 | Cat-1 | Category-1 |
| 2ಎ | ಪ್ರವರ್ಗ-2ಎ | 2A | Category-2A |

| | | | |
|---|---|---|---|
| 2ಬಿ | ಪ್ರವರ್ಗ-2ಬಿ | 2B | Category-2B |
| 3ಎ | ಪ್ರವರ್ಗ-3ಎ | 3A | Category-3A |
| 3ಬಿ | ಪ್ರವರ್ಗ-3ಬಿ | 3B | Category-3B |
| ಮಾ.ಸೈ | ಮಾಜಿ ಸೈನಿಕ | Ex.MP | Ex.Military Person |
| ಗ್ರಾ.ಅ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಯೋ.ನಿ.ಅ | ಯೋಜನೆ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ತೃ.ಲಿ | ತೃತೀಯ ಲಿಂಗ | TG | Transgender |
| ಮ.ಅ | ಮಹಿಳಾ ಅಭ್ಯರ್ಥಿ | Women | Women |

10) **ಶೈಕ್ಷಣಿಕ ವಿದ್ಯಾರ್ಹತೆ:-**

1. ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಗೆ ನಮೂದಿಸಿರುವ ಕೋಷ್ಟಕದಲ್ಲಿರುವಂತೆ ವಿದ್ಯಾರ್ಹತೆಯನ್ನು ನಿಗದಿಪಡಿಸಿದೆ. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೇ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

| ಕ್ರ.ಸಂ | ಹುದ್ದೆ | ವಿದ್ಯಾರ್ಹತೆ |
|---|---|---|
| 1 | "ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರು" | ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು, ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್‌ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್‌ನಲ್ಲಿ ಉತ್ತೀರ್ಣರಾಗಿರಬೇಕು. |

11. ಆಯ್ಕೆ ವಿಧಾನ:

ಸದರಿ ಹುದ್ದೆಗಳನ್ನು ಯಾವ ಗ್ರಾಮ ಪಂಚಾಯತಿನಲ್ಲಿ ಖಾಲಿ ಇದೆಯೋ, ಆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುವ ಪಿ.ಯು.ಸಿ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಮೆರಿಟ್‌ನೊಂದಿಗೆ, ಲೈಬ್ರರಿ ಸೈನ್ಸ್ ಸರ್ಟಿಫಿಕೇಷನ್ ಕೋರ್ಸ್ ಪ್ರಮಾಣ ಪತ್ರವನ್ನು ಹೊಂದಿ, 03 ತಿಂಗಳ ಕಂಪ್ಯೂಟರ್ ಕೋರ್ಸ್ ಅನ್ನು ಹೊಂದಿರುವ ಅಭ್ಯರ್ಥಿಗಳಿಗೆ ನೇಮಕಾತಿಯಲ್ಲಿ ಮೊದಲ ಆದ್ಯತೆ ನೀಡಿ ನೇಮಕಾತಿಗೆ ಕ್ರಮವಹಿಸಲಾಗುವುದು ಹಾಗೂ ಒಂದು ವೇಳೆ ಸ್ಥಳೀಯ ಗ್ರಾಮ ಪಂಚಾಯತಿಯಲ್ಲಿ ಅರ್ಹ ಅಭ್ಯರ್ಥಿಗಳು ಅಭ್ಯವಾಗದಿದ್ದಲ್ಲಿ ಅದೇ ತಾಲೂಕಿನ ಇತರೆ ಗ್ರಾಮ ಪಂಚಾಯತಿಯಲ್ಲಿ ವಾಸಿಸುವ ಪಿ.ಯು.ಸಿ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಮೆರಿಟ್‌ನೊಂದಿಗೆ, ಲೈಬ್ರರಿ ಸೈನ್ಸ್ ಸರ್ಟಿಫಿಕೇಷನ್ ಕೋರ್ಸ್ ಪ್ರಮಾಣ ಪತ್ರವನ್ನು ಹೊಂದಿ, 03 ತಿಂಗಳ ಕಂಪ್ಯೂಟರ್ ಕೋರ್ಸ್ ಅನ್ನು ಹೊಂದಿರುವ ಅಭ್ಯರ್ಥಿಗಳಿಗೆ ಎರಡನೇ ಆದ್ಯತೆ ನೀಡಿ ನೇಮಕಾತಿಗೆ ಕ್ರಮವಹಿಸಲಾಗುವುದು. ಒಂದು ವೇಳೆ ಅದೇ ತಾಲೂಕಿನ ಯಾವುದೇ

**ವಯೋಮಿತಿ:-**

ಅರ್ಜಿ ಸಲ್ಲಿಸಲು 10.06.2026 ರ ದಿನಾಂಕದಂತೆ ಈ ಕೆಳಕಂಡ ಕೋಷ್ಟಕದಲ್ಲಿರುವ ಆಯಾ ಹುದ್ದೆಗಳ ಮುಂದೆ ಮೂದಿಸಿರುವ ಕನಿಷ್ಟ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

| | |
|---|---|
| ಕನಿಷ್ಠ ವಯೋಮಿತಿ | 18 ವರ್ಷಗಳು |
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ ಗರಿಷ್ಠ | ಗರಿಷ್ಠ 40 ವರ್ಷಗಳು |
| ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ಗರಿಷ್ಠ 43 ವರ್ಷಗಳು |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ರ ಅಭ್ಯರ್ಥಿಗಳಿಗೆ | ಗರಿಷ್ಠ 45 ವರ್ಷಗಳು |

**ವಯೋಮಿತಿ ಸಡಿಲಿಕೆ:**

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| 1 | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |
| 2 | ವಿಶೇಷ ಚೇತನ ಅಭ್ಯರ್ಥಿಗಳಿಗೆ | 10 ವರ್ಷಗಳು |
| 3 | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ) | 10 ವರ್ಷಗಳು |

13) **ಮೀಸಲಾತಿ ಪ್ರಮಾಣ ಪತ್ರಗಳು:**

<table>
<tr><td rowspan="2">(1) ಜಾತಿ/ಮೀಸಲಾತಿ ಪ್ರಮಾಣಪತ್ರಗಳು</td><td>ಮೀಸಲಾತಿ ಪ್ರಮಾಣಪತ್ರಗಳನ್ನುಸಲ್ಲಿಸಬೇಕಾದ ನಮೂನೆಗಳು:<br><table>
<tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು.</td><td>ನಮೂನೆ -ಡಿ</td></tr>
<tr><td>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ-ಇ</td></tr>
<tr><td>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ-ಎಫ್</td></tr>
</table></td></tr>
<tr><td>ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ (Government Notification No SWD 155 BCA 2012 dt: 17.02.2012 ರನ್ವಯ) ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ</td></tr>
</table>

ಗ್ರಾಮ ಪಂಚಾಯತಿಗಳಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಹುದ್ದೆ ಖಾಲಿ ಇರುವ ಸ್ಥಳೀಯ ಗ್ರಾಮ ಪಂಚಾಯತಿಯಲ್ಲಿ ವಾಸಿಸುವ ಪಿ.ಯು.ಸಿ ವಿದ್ಯಾರ್ಹತೆಯನ್ನು ಹೊಂದಿದ ಅಭ್ಯರ್ಥಿಗಳಲ್ಲಿ ಮೆರಿಟ್ ಆಧಾರದ ಮೇಲೆ ನೇಮಕಾತಿಗೆ ಕ್ರಮವಹಿಸಲಾಗುವುದು. ವಾಸಸ್ಥಳಕ್ಕೆ ಸಂಬಂಧಿಸಿದಂತೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ ಕಡ್ಡಾಯವಾಗಿ ಅಪ್ ಲೋಡ್ ಮಾಡುವುದು.

ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿಗೆ ಪರಿಗಣಿಸಲಾಗುವುದು.

1) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಯಾವುದೇ ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

2) ನೈತಿಕ ದುರ್ನಡತೆಯಿಂದಾಗಿ ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೆ ಒಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ, ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ ಅಥವಾ ವಜಾ ಮಾಡಲ್ಪಟ್ಟದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

3) ಅರ್ಜಿ ಸಲ್ಲಿಸುವಾಗ ಸುಳ್ಳು ಮಾಹಿತಿ/ದಾಖಲೆ ನೀಡಿ ಉದ್ಯೋಗ ಪಡೆದುಕೊಳ್ಳುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

4) ನೇಮಕಾತಿ ಅರ್ಜಿಯೊಂದಿಗೆ ಸಲ್ಲಿಸುವ ಎಲ್ಲಾ ದಾಖಲೆಗಳು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಇರತಕ್ಕದ್ದು.

5) ಅಭ್ಯರ್ಥಿಯ ಅರ್ಹತೆಯ ವಿಷಯದಲ್ಲಿ ಸಿಬ್ಬಂದಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

6) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.

7) ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದ ಇರುವುದಿಲ್ಲ.

8) ಈ ಅಧಿಸೂಚನೆಯನ್ನು ಯಾವುದೇ ಕಾರಣವನ್ನು ನೀಡದೆ ಯಾವುದೇ ಸಮಯದಲ್ಲಿ ರದ್ದುಗೊಳಿಸುವ ಅಧಿಕಾರವು ಸಿಬ್ಬಂದಿ ಆಯ್ಕೆ ಪ್ರಾಧಿಕಾರಕ್ಕೆ ಇರುತ್ತದೆ.

9) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸಹಿಮ 2025 ಬೆಂಗಳೂರು ದಿನಾಂಕ:27.02.2026 ರಂತೆ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಹೆಚ್ಚಿಸಲಾದ ಮೀಸಲಾತಿ ಪ್ರಮಾಣವನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.

10) ನಿಗದಿಪಡಿಸಿದ ದಿನಾಂಕದಂದು ದಾಖಲೆಗಳ ಪರಿಶೀಲನೆಗೆ ಹಾಜರಾಗುವ ದಿನ ಮೂಲ ದಾಖಲೆಗಳನ್ನು ಹಾಗೂ ಮೂಲ ಅಂಕಪಟ್ಟಿಗಳನ್ನು ಪರಿಶೀಲಿಸಲಾಗುವುದು. ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಮುಂಚಿತವಾಗಿ ಮೂಲ ಅಂಕಪಟ್ಟಿಯನ್ನು ಅರ್ಹ ಅಭ್ಯರ್ಥಿಗಳಿಂದ ಪಡೆಯಲಾಗುವುದು. ನಂತರ ಸಂಬಂಧಿಸಿದ ಇಲಾಖೆಗೆ ಕಳುಹಿಸಿ ಅಂಕಪಟ್ಟಿಯ ನೈಜತೆ ಬಗ್ಗೆ ಪರಿಶೀಲನೆ ನಡೆಸಲಾಗುವುದು.

- **ವಿಶೇಷ ಸೂಚನೆ:** ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

| | |
|---|---|
| (5) ವಿಶೇಷ ಚೇತನ ಅಭ್ಯರ್ಥಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್149 ಎಸ್ಆರ್ಆರ್ 2020 ದಿನಾಂಕ:25.09.2020ರಲ್ಲಿ ನೇಮಕಾತಿ ಸಂದರ್ಭದಲ್ಲಿ ಶೇ.5ರಷ್ಟು ವಿಶೇಷ ಚೇತನರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ವಿಶೇಷ ಚೇತನವುಳ್ಳ ಅಭ್ಯರ್ಥಿಗಳು ಮತ್ತು ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸೆನೆನಿ/2005 ದಿನಾಂಕ:19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ವಿಶೇಷ ಚೇತನರ ಬಗ್ಗೆ ಸರ್ಕಾರದ ಆದೇಶ ಸಂ:ಮಮಇ 65/ಪಿಹೆಚ್‌ಪಿ 2010 ದಿ:18.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ ತಾಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ವಿಶೇಷ ಚೇತನರ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. |

14) <u>ವಿಶೇಷ ಸೂಚನೆಗಳು:</u>

"ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ" ಹುದ್ದೆಗಳಿಗೆ ಆನ್‌ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಏನೇ ಸಂದರ್ಭವಿದ್ದರೂ ವಯೋಮಿತಿ, ವಿದ್ಯಾರ್ಹತೆ ಮತ್ತು ಯಾವುದೇ ಮೀಸಲಾತಿಗಳಿಗೆ ಸಂಬಂಧಿಸಿದಂತೆ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್‌ಲೋಡ್ ಮಾಡಲಾದ ಪ್ರಮಾಣ ಪತ್ರಗಳನ್ನೇ ಅಂತಿಮವೆಂದು ತೀರ್ಮಾನಿಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳ ಮೂಲ ಪ್ರತಿಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು ಹಾಗೂ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ಕಾಯದೇ ನೀಡಲಾಗಿರುವ ಸಾಕಷ್ಟು ಅವಧಿಯಲ್ಲಿ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸತಕ್ಕದ್ದು ಮತ್ತು ಅರ್ಜಿಯನ್ನು ಸಂಪೂರ್ಣವಾಗಿ ಸಲ್ಲಿಸುವ ಮುಂಚೆ ಅಪ್‌ಲೋಡ್ ಮಾಡಿದ ದಾಖಲಾತಿಗಳು ಹಾಗೂ ಇತರೆ ಮಾಹಿತಿಯನ್ನು ಮತ್ತೊಮ್ಮೆ ಪರಿಶೀಲಿಸಿಕೊಂಡು ಸಲ್ಲಿಸತಕ್ಕದ್ದು.

| |
|---|
| **ಆದ್ದರಿಂದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.** |
| (1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಅಂಕಪಟ್ಟಿಗಳನ್ನು ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ.<br>(2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ. |

| | |
|---|---|
| | ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. ಪ.ಜಾತಿ/ಪ.ಪಂಗಡ/ಪ್ರ.ವರ್ಗ-1ರಅಭ್ಯರ್ಥಿಗಳು ಪಡೆದಿರುವ/ ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ: **SWD 155 BCA 2011 Dt:22.02.2012)** |
| (2)ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕ: 13.02.2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| | ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ ಮಾಡುವ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಅಪ್ಲೋಡ ಮಾಡತಕ್ಕದ್ದು. |
| | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತವಾದಲ್ಲಿ, ಅಂತಹವರು ಆ ಪ್ರವರ್ಗದಡಿ ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ. |
| (3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಅಧಿಸೂಚನೆ ಸಂಖ್ಯೆ 71 ಸೆನೆನಿ 2001 ದಿ: 24.10.2002 ರನ್ವಯ ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. |
| (4) ಮಾಜಿ ಸೈನಿಕರಿಗೆ ಮೀಸಲಾತಿ | ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಈ ಸಂಬಂಧ ಪ್ರಮಾಣ ಪತ್ರಗಳನ್ನುಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡತಕ್ಕದ್ದು. |

## ಜಿಲ್ಲಾ ಪಂಚಾಯತಿಯೊಂದಿಗೆ ಪತ್ರ ವ್ಯವಹಾರ:

ಜಿಲ್ಲಾ ಪಂಚಾಯತಿಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಯಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಜಿಲ್ಲಾ ಪಂಚಾಯತಿಯ ಗಮನಕ್ಕೆ ತರತಕ್ಕದ್ದು, ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಜಿಲ್ಲಾ ಪಂಚಾಯತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಜಿಲ್ಲಾ ಪಂಚಾಯತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು. ಅಭ್ಯರ್ಥಿಗಳು ಜಿಲ್ಲಾ ಪಂಚಾಯತಿಯೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳನ್ನು ಒದಗಿಸತಕ್ಕದು.

(iv) ಹುದ್ದೆಯ/ವಿಷಯದ ಹೆಸರು/ನೋಂದಣಿಸಂಖ್ಯೆ

(v) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ

(vi) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

16) **ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ಅವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ: ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

17) ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿನಾಂಕ: 14-11-2022ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022ರ ನಿಯಮದಲ್ಲಿ ಉಲ್ಲೇಖಿಸಿರುವ ಪ್ರಕಾರ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಮಾರ್ಗಸೂಚಿಗಳಿಗನುಸಾರ ನೇರ ನೇಮಕಾತಿ ಕೋಟಾದ ಮೀಸಲಾತಿ ನೀತಿಯನ್ನು ಅನುಸರಿಸಿ ಆಯ್ಕೆ ಮಾಡಲು ಸೂಚಿಸಿರುವುದರಿಂದ ಇದರಂತೆ ಹಾಗೂ ಎಲ್ಲಾ ನಿಯಮಾವಳಿಗಳನ್ನು ಅನುಸರಿಸಿ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲಾಗುತ್ತದೆ.

18) ಸದರಿ ನೇಮಕಾತಿಗೆ ಅರ್ಜಿ ಸಲ್ಲಿಸಲು ಕೇವಲ ಆನ್ ಲೈನ್ ಮೂಲಕ ಮಾತ್ರವೇ ಅವಕಾಶ ಕಲ್ಪಿಸಿದ್ದು, ಖುದ್ದಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

19) ಅಭ್ಯರ್ಥಿಯು ಅರ್ಜಿ ಶುಲ್ಕವನ್ನು ಪಾವತಿ ಮಾಡದಿದ್ದಲ್ಲಿ, ಸದರಿ ಅಭ್ಯರ್ಥಿಯ ಅರ್ಜಿಯನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

20) ಜಾತಿ ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಮರು ಪರಿಶೀಲಿಸಿದ ನಂತರ ಆದೇಶ ನೀಡಲಾಗುವುದು ಹಾಗೂ ಮೀಸಲಾತಿ ಕೋರುವ ಅಭ್ಯರ್ಥಿಗಳು ಆಯಾ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಕುರಿತು ಮರು ಪರಿಶೀಲನೆ ಅವಶ್ಯವಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೈಜತೆ ಬಗ್ಗೆ ಪರಿಶೀಲನೆ ನಡೆಸಲಾಗುವುದು. ಅಭ್ಯರ್ಥಿಗಳು ಮೂಲ ಪ್ರಮಾಣ ಪತ್ರಗಳನ್ನು ಮಾತ್ರವೇ ಆನ್ ಲೈನ್ ನಲ್ಲಿ ಅಪ್ಲೋಡ್ ಮಾಡತಕ್ಕದ್ದು.

(3) ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣಪತ್ರ (ಪೂರ್ಣವಾಗಿ) (Discharge Certificate) ಮತ್ತು ಪಿಂಚಣಿ ಪಡೆಯುತ್ತಿರುವ ದಾಖಲೆಯ ಪ್ರತಿ/ಮಾಜಿಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣಪತ್ರ (Dependent certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

(4) ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಒಳ ಮೀಸಲಾತಿ ಕೋರುವ ಅಭ್ಯರ್ಥಿಗಳು ತಹಶೀಲ್ದಾರರು ನೀಡುವ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

(5) ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರಿಂದ ಪಡೆದ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ).

(6) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-2ರಲ್ಲಿ (ಮೀಸಲಾತಿಕೋರಿದ್ದಲ್ಲಿ).

(7) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ).

(8) ಅಂಗವಿಕಲ ಮೀಸಲಾತಿ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ).

(9) ವಯೋಮಿತಿ ಸಡಿಲಿಕೆ ಕೋರುವ ಸರ್ಕಾರಿ ನೌಕರರು ನಿಯಮಗಳಲ್ಲಿರುವಂತೆ ಸೇವೆ ಸಲ್ಲಿಸಿರುವ ನೇಮಕಾತಿ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

(10)ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).

(11)ತೃತೀಯ ಲಿಂಗದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ).

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ವಯೋಮಿತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ ಹಾಗೂ ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ **ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ** ಕಡ್ಡಾಯವಾಗಿ **ಅಪ್‌ಲೋಡ್ ಮಾಡತಕ್ಕದ್ದು.**

1) ಅಭ್ಯರ್ಥಿಗಳು ತಮಗೆ ಅನ್ವಯಿಸುವ ಮೀಸಲಾತಿಗಳನ್ನು **ಆನ್‌ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲೇ ಕೋರತಕ್ಕದ್ದು** (Claim) ಹಾಗೂ ಈ ಸಂಬಂಧ ಸದರಿ ಪ್ರಮಾಣ ಪತ್ರಗಳನ್ನು **ತಪ್ಪದೇ ಅಪ್‌ಲೋಡ್** ಮಾಡತಕ್ಕದ್ದು. ಈ ಎರಡೂ ಪ್ರಕ್ರಿಯೆಗಳು ಕಡ್ಡಾಯವಾಗಿದ್ದು, ತಪ್ಪಿದ್ದಲ್ಲಿ **ಅಂತಹ ಮೀಸಲಾತಿಯನ್ನು ತಿರಸ್ಕರಿಸಲಾಗುವುದು. ಈ ಸಂಬಂಧ ತದನಂತರ** ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

2) ಫೋಟೋ ಮತ್ತು ಸಹಿಯನ್ನು/ ದಾಖಲೆಗಳನ್ನು **ಅಪ್‌ಲೋಡ್** ಮಾಡದೇ ಇರುವ **ಅಪೂರ್ಣವಾಗಿರುವ** ದಾಖಲೆಗಳನ್ನು ಅಪ್‌ಲೋಡ್ ಮಾಡಿರುವ ಹಾಗೂ ಶುಲ್ಕ ಸಂದಾಯ **ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

3) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ **ಅರ್ಜಿಯ ಒಂದು ಫೋಟೋ ಪ್ರತಿಯನ್ನು** ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. **ಜಿಲ್ಲಾ ಪಂಚಾಯತಿಯಿಂದ ಯಾವುದೇ ಕಾರಣಕ್ಕೂ ಅರ್ಜಿಯ ಪ್ರತಿಯನ್ನು** ಒದಗಿಸಲಾಗುವುದಿಲ್ಲ.

4) ಹುದ್ದೆಗಳಿಗೆ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಪರಿಗಣಿಸುವುದಿಲ್ಲ.

ಸದರಿ ಹುದ್ದೆಗಳಿಗೆ ನೇಮಕಗೊಳ್ಳುವವರು ಗ್ರಾಮ ಪಂಚಾಯತಿಯ ನೌಕರರಾಗಿರುತ್ತಾರೆ ವಿನಃ ಸರಕಾರಿ ನೌಕರರಾಗಿರುವುದಿಲ್ಲ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 311 ಮತ್ತು 316 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(೪) ದಿನಾಂಕ: 14-11-2022ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ ) ನಿಯಮಗಳು, 2022 ರ ನಿಯಮಗಳು ಸದರಿ ನೌಕರರಿಗೆ ಅನ್ವಯಿಸುತ್ತದೆ.

22) **ಅರ್ಜಿ ಸಲ್ಲಿಸಬೇಕಾದ ವಿಳಾಸ:** ವೆಬ್ ಸೈಟ್: https://zpraichur.karnataka.gov.in/kn ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

23) **ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:-**

ಜಿಲ್ಲಾ ಪಂಚಾಯತಿಯ ದೂರವಾಣಿ ಸಂಖ್ಯೆ: 08532-230539.

**ಸದಸ್ಯ ಕಾರ್ಯದರ್ಶಿಗಳು**
**ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ**
**ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿ ಹಾಗೂ**
**ಉಪ ಕಾರ್ಯದರ್ಶಿಗಳು,**
**ಜಿಲ್ಲಾ ಪಂಚಾಯತ್, ರಾಯಚೂರು.**

ಪ್ರತಿ:

1. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಲ್ಲುಕಟ್ಟಡ, ಕಾಳಿದಾಸ ರಸ್ತೆ, ಕೆ.ಜಿ.ರೋಡ್ ಜಂಕ್ಷನ್, ಗಾಂಧಿನಗರ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ಡಿ.ಐ.ಓ., ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ, ಜಿಲ್ಲಾ ಪಂಚಾಯತ್, ರಾಯಚೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
4. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತಿ ರಾಯಚೂರು, ಮಾನವಿ, ದೇವದುರ್ಗ ಹಾಗೂ ಸಿರವಾರ ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಆಡಳಿತಾಧಿಕಾರಿಗಳು ಮತ್ತು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಕಳುಹಿಸುತ್ತಾ, ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಅಧಿಸೂಚನೆಯನ್ನು ಗ್ರಾಮ ಪಂಚಾಯತ್ ಸೂಚನಾ ಫಲಕದಲ್ಲಿ ಪ್ರಕಟಿಸುವುದು. (ಗ್ರಾ.ಪಂ.ಮುಖಾಂತರ).
6. ಸಹಾಯಕ ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಜಿಲ್ಲಾ ಪಂಚಾಯತ್, ರಾಯಚೂರು ಇವರಿಗೆ ಜಿಲ್ಲಾ ಪಂಚಾಯತ್ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ.